# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಳ್ತಂಗಡಿ ತಾಲ್ಲೂಕು ಕನ್ಯಾಡಿ ಜಲಾನಯನ ಅಭಿವೃದ್ಧಿ ಸಂಘದ ವತಿಯಿಂದ ನಿರ್ಮಿಸಲಾದ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರದ ಜಂಟಿ ಇಲಾಖಾ ವಿಚಾರಣೆ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 62 ಕೃಪವಿ 2005, ದಿನಾಂಕ: 28–04–2007.
2. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 62 ಕೃಪವಿ 2005, ದಿನಾಂಕ: 18–08–2007. ಮತ್ತು 29–07–2008.
3. ವಿಚಾರಣಾ ವರದಿ ದಿನಾಂಕ: 09–11–2010.

*********

**ಪ್ರಸ್ತಾವನೆ:**

ಬೆಳ್ತಂಗಡಿ ತಾಲ್ಲೂಕು ಕನ್ಯಾಡಿ ಜಲಾನಯನ ಅಭಿವೃದ್ಧಿ ಸಂಘದ ವತಿಯಿಂದ 2002–03ನೇ ಸಾಲಿನ ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಯಡಿಯಲ್ಲಿ ಬೆಳ್ತಂಗಡಿ ತಾಲ್ಲೂಕಿನ ಕನ್ಯಾಡಿ ಗ್ರಾಮದಲ್ಲಿ ನಿರ್ಮಿಸಲಾದ ಕೃಷಿ ಹೊಂಡ 3,4,5, ಮತ್ತು 7ರಲ್ಲಿನ ಕೃಷಿ ಹೊಂಡ ಕಾಮಗಾರಿಗಳನ್ನು ಮಂಜೂರಾತಿ ಪಡೆದ ನಕ್ಷೆ ಮತ್ತು ಅಂದಾಜು ಪತ್ರಿಕೆ ಅನ್ವಯ ಕಾಮಗಾರಿಯನ್ನು ಕೂಲಿಯಾಳುಗಳನ್ನು ಬಳಸಿಕೊಂಡು ನಿರ್ವಹಿಸದೆ ಯೋಜನೆ ಉದ್ದೇಶಕ್ಕೆ ವಿರುದ್ಧವಾಗಿ ಯಂತ್ರದ ಮೂಲಕ ಕಡಿಮೆ ವೆಚ್ಚದಲ್ಲಿ ಕಾಮಗಾರಿ ನಿರ್ವಹಿಸಿ, ಕೂಲಿಯಾಳುಗಳಿಂದ ಕಾಮಗಾರಿಯನ್ನು ನಿರ್ವಹಿಸಲಾಗಿದೆ ಎಂದು ಲೆಕ್ಕ ಪತ್ರದಲ್ಲಿ ತೋರಿಸಿ, ಹೆಚ್ಚಿನ ದರವನ್ನು ನಮೂದಿಸಿ ಇಲಾಖಾ ಮಾರ್ಗಸೂಚಿಯನ್ನು ಉಲ್ಲಂಘಿಸಿ, ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸರ್ಕಾರಿ ಹಣ ಒಟ್ಟು ರೂ 40,000ಗಳನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆಂಬ ಆಪಾದನೆಗೆ ಸಂಬಂಧಿಸಿದಂತೆ, ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 28–04–2007ರ ಕಾರಣ ಕೇಳುವ ಪತ್ರದಲ್ಲಿ ಕೆಳಕಂಡವರ ವಿರುದ್ಧ ಆಪಾದನಾ ಪಟ್ಟಿಯನ್ನು ಕರ್ನಾಟಕ ನಾಗರಿಕ ಸೇವಾ (ಸಿ.ಸಿ.ಎ) ನಿಯಮಾವಳಿ 1957ರ ನಿಯಮ 11ರಡಿ ಜಾರಿಮಾಡಲಾಗಿತ್ತು.

| ಕ್ರ.ಸಂ. | ಅಧಿಕಾರಿ/ನೌಕರರ ಹೆಸರು |
|---|---|
| 1. | ಶ್ರೀ ಕೆ.ಎಸ್.ಮೋಹನ್ ದಾಸ್, ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಬೆಳ್ತಂಗಡಿ. |
| 2. | ಶ್ರೀ ಎಂ.ಸಿ.ತಂಬಾಕದ, ಹಿಂದಿನ ಜಲಾನಯನ ಅಭಿವೃದ್ಧಿ ಅಧಿಕಾರಿ, ಉಡುಪಿ. |
| 3. | ಶ್ರೀ ಗೋಪಾಲ ಕೃಷ್ಣ ಶೆಟ್ಟಿಗಾರ್, ಕೃಷಿ ಸಹಾಯಕ, ಬೆಳ್ತಂಗಡಿ. |

ಮೇಲ್ಕಂಡ ಅಧಿಕಾರಿ/ನೌಕರರುಗಳು ತಮಗೆ ಜಾರಿಮಾಡಿದ ಕಾರಣ ಕೇಳುವ ಪತ್ರಕ್ಕೆ ನೀಡಿದ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ, ಪ್ರಕರಣದ ಸತ್ಯಾಸತ್ಯತೆಯನ್ನು ಕಂಡುಕೊಳ್ಳಲು ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ: 29-07-2008ರ ಸರ್ಕಾರದ ಆದೇಶದಲ್ಲಿ ಶ್ರೀ ಬಿ.ಎಲ್.ಶ್ರೀಕಂಠಯ್ಯ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು. ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ಕ್ರಮಾಂಕ (3)ರಲ್ಲಿ ಓದಲಾದ ದಿನಾಂಕ: 09-11-2010ರ ಪತ್ರದಲ್ಲಿ ವಿಚಾರಣಾಧಿಕಾರಿಯವರು ಮೇಲ್ಕಂಡ ಅಧಿಕಾರಿ/ನೌಕರರ ಮೇಲೆ ಇಲಾಖಾ ವಿಚಾರಣೆಯನ್ನು ಕೈಗೊಂಡು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ. ವಿಚಾರಣಾ ವರದಿಯನ್ನು ಪರಿಶೀಲಿಸಲಾಗಿ ಮೇಲ್ಕಂಡ ಆರೋಪಿತರ ವಿರುದ್ಧದ ಆರೋಪವು ರುಜುವಾತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ. ವಿಚಾರಣಾಧಿಕಾರಿಯವರು ನಿವೃತ್ತ ಜಿಲ್ಲಾ ನ್ಯಾಯಾಧೀಶರಾಗಿದ್ದು, ವಿಚಾರಣೆಯನ್ನು ನಿಯಮಾನುಸಾರ ನಡೆಸಲು ಆರೋಪದ ಕುರಿತಂತೆ ಸಾಕ್ಷ್ಯಾಧಾರಗಳ ಸಹಿತ ಸಮರ್ಪಕವಾಗಿ ಚರ್ಚಿಸಿ ನಿರ್ಣಯ ದಾಖಲಿಸಿರುವುದರಿಂದ ವಿಚಾರಣಾಧಿಕಾರಿಯವರ ವರದಿಯನ್ನು ಒಪ್ಪಿ ಪ್ರಕರಣದಲ್ಲಿ ವಿಚಾರಣೆಗೆ ಗುರಿಪಡಿಸಿದ ಮೂವರನ್ನು ಆರೋಪಗಳಿಂದ ಮುಕ್ತರನ್ನಾಗಿಸಲು ಸರ್ಕಾರವು ತೀರ್ಮಾನಿಸಿರುತ್ತದೆ, ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 62 ಕೃಪವಿ 2005**
**ಬೆಂಗಳೂರು, ದಿನಾಂಕ: 14-07-2011**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ

ಅಧಿಕಾರಿ/ನೌಕರರ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗದ ಕಾರಣ ಅವರುಗಳನ್ನು ಅವರ ಮೇಲಿನ ಆರೋಪಗಳಿಂದ ದೋಷಮುಕ್ತರನ್ನಾಗಿ ಆದೇಶಿಸಿದೆ.

| ಕ್ರ.ಸಂ. | ಅಧಿಕಾರಿ/ನೌಕರರ ಹೆಸರು |
|---|---|
| 1. | ಶ್ರೀ ಕೆ.ಎಸ್.ಮೋಹನ್ ದಾಸ್, ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ಬೆಳ್ತಂಗಡಿ. |
| 2. | ಶ್ರೀ ಎಂ.ಸಿ.ತಂಬಾಕದ, ಹಿಂದಿನ ಜಲಾನಯನ ಅಭಿವೃದ್ಧಿ ಅಧಿಕಾರಿ, ಉಡುಪಿ. |
| 3. | ಶ್ರೀ ಗೋಪಾಲ ಕೃಷ್ಣ ಶೆಟ್ಟಿಗಾರ್, ಕೃಷಿ ಸಹಾಯಕ, ಬೆಳ್ತಂಗಡಿ. |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.

ಪ್ರತಿಗೆ:

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
3. ಆಯುಕ್ತರು, ಕೃಷಿ/ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
4. ಶ್ರೀ ಬಿ.ಎಲ್. ಶ್ರೀಕಂಠಯ್ಯ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ. 239/1, ನಾಗಶ್ರೀ 24ನೇ ಮೈನ್, ಚಾಮರಾಜ ಪೇಟೆ, ಬೆಂಗಳೂರು 560 018.
5. ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ಮಂಗಳೂರು.
6. ಜಂಟಿ ಕೃಷಿ ನಿರ್ದೇಶಕರು, ಮಂಗಳೂರು.
7. ಆಡಳಿತಾಧಿಕಾರಿ ಮತ್ತು ಪ್ರಕರಣದ ಮಂಡನಾಧಿಕಾರಿ, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಮಂಗಳೂರು.
8. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ.
10. ಸಂಬಂಧಪಟ್ಟ ಅಧಿಕಾರಿಗಳಿಗೆ (ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಇವರ ಮುಖಾಂತರ).
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.